ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE:

## ಸಂಸದೀಯ ಮೌಲ್ಯಗಳ ಕುಸಿತ ತಡೆಗಟ್ಟಲು ಆತ್ಮಾವಲೋಕನ ಸಭೆ

# ಮೌಲ್ಯ ಮರೆತರೆ ಅರಾಜಕತೆ: ಕಾಗೇರಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಮೌಲ್ಯಗಳನ್ನು ಮರೆತರೆ ಮುಂದೊಂದು ದಿನ ಅರಾಜಕತೆ ಎದುರಾಗಬಹುದು. ಅಂಥ ಪರಿಸ್ಥಿತಿ ಬರುವುದನ್ನು ತಡೆಯಬೇಕು ಎಂದು ವಿಧಾನ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ಕಾಮನ್‌ವೆಲ್ತ್ ಸಂಸದೀಯ ಸಂಘದ ಕರ್ನಾಟಕ ಶಾಖೆಯ ವತಿಯಿಂದ 'ಸಂಸದೀಯ ಮೌಲ್ಯಗಳ ಕುಸಿತ ತಡೆಗಟ್ಟಲು ಒಂದು ಆತ್ಮಾವಲೋಕನ' ಕುರಿತು ಬುಧವಾರ ಇಲ್ಲಿ ನಡೆದ ಸಭೆಯಲ್ಲಿ ಮಾತನಾಡಿದರು.

'ಮೌಲ್ಯಗಳನ್ನು ಉಳಿಸಿಕೊಳ್ಳುವ ಬಗ್ಗೆ ವಿಶ್ವಮಟ್ಟದಲ್ಲಿ ಚರ್ಚೆಗಳು ನಡೆಯುತ್ತಿವೆ. ಹೀಗಾಗಿ, ಸಂಸದೀಯ ವ್ಯವಸ್ಥೆ ಹೇಗಿರಬೇಕು ಎಂಬ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಲು ಈ ಸಭೆ ಆಯೋಜಿಸಲಾಗಿದೆ' ಎಂದರು.

'ಜನಪ್ರತಿನಿಧಿಗಳು ಜನರ ಧ್ವನಿಯಾಗಬೇಕು. ವ್ಯವಸ್ಥೆಯ ಸುಳಿ ಆಗಬಾರದು. ಸಂವಿಧಾನದ ಚೌಕಟ್ಟಿನಲ್ಲಿ ಆಡಳಿತ ನಡೆಸುವ ವಿಚಾರದಲ್ಲಿ ರಾಜ್ಯ ಮೇಲ್ಪಂಕ್ತಿ ಆಗಬೇಕು' ಎಂದೂ ಅವರು ಹೇಳಿದರು.

ಚಿಂತಕ ಗುರುರಾಜ ಕರಜಗಿ ಮಾತನಾಡಿ, 'ಇವತ್ತಿನ ಮೌಲ್ಯಗಳ ಬಗ್ಗೆ ನಮಗೆ ಬೇಸರವಿದೆ. ಜನಪ್ರತಿನಿಧಿಗಳು ಜನರಿಗೆ ಮಾದರಿಯಾಗಬೇಕು. ಆದರೆ, ಇವತ್ತಿನ ಸನ್ನಿವೇಶ ಹಾಗಿಲ್ಲ. ಜನರನ್ನು ಯಾವಾಗಲೂ ಹಿಡಿದಿಡಲು ಸಾಧ್ಯವಿಲ್ಲ. ಅವರ ಆಕ್ರೋಶದ ಕಟ್ಟೆ ಯಾವಾಗ ಬೇಕಾದರೂ ಒಡೆಯಬಹುದು. ಇವನ್ನು ಜನಪ್ರತಿನಿಧಿಗಳು ಅರ್ಥ ಮಾಡಿಕೊಳ್ಳಬೇಕು' ಎಂದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಎಸ್. ಆರ್. ಪಾಟೀಲ, ಸಚಿವರಾದ ಜಗದೀಶ ಶೆಟ್ಟರ್, ಅರವಿಂದ ಲಿಂಬಾವಳಿ, ಮಾಜಿ ಸಭಾಪತಿ ಡಿ.ಎಚ್. ಶಂಕರಮೂರ್ತಿ, ಶಾಸಕರಾದ ಡಿ.ಕೆ. ಶಿವಕುಮಾರ್, ಎಚ್.ಕೆ. ಪಾಟೀಲ, ಕೃಷ್ಣ ಬೈರೇಗೌಡ, ದಿನೇಶ್ ಗುಂಡೂರಾವ್, ಕೆ.ಆರ್. ರಮೇಶ್ ಕುಮಾರ್, ಬೋಪಯ್ಯ, ಎಚ್. ವಿಶ್ವನಾಥ್, ಸಂಸದ ಶಿವಕುಮಾರ್ ಉದಾಸಿ ಹಾಗೂ ಸಂಸದರು, ಶಾಸಕರು, ವಿವಿಧ ಕ್ಷೇತ್ರಗಳ ಪ್ರಮುಖರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



ಸಂಸದೀಯ ಮೌಲ್ಯಗಳ ಕುಸಿತ ತಡೆಗಟ್ಟುವ ಕುರಿತ ಆತ್ಮಾವಲೋಕನ ಸಭೆಯಲ್ಲಿ ಬಿ.ಎಸ್. ಯಡಿಯೂರಪ್ಪ, ವಿಶ್ವೇಶ್ವರ ಹೆಗಡೆ ಕಾಗೇರಿ, ಬಸವರಾಜ ಹೊರಟ್ಟಿ, ಸಿದ್ದರಾಮಯ್ಯ, ಎಸ್.ಆರ್ ಪಾಟೀಲ ಪಾಲ್ಗೊಂಡಿದ್ದರು –ಪ್ರಜಾವಾಣಿ ಚಿತ್ರ

## ವ್ಯಾಪಾರವಾಗಿರುವ ಚುನಾವಣೆ: ಸಿದ್ದರಾಮಯ್ಯ

ಚುನಾವಣಾ ವ್ಯವಸ್ಥೆ ಬದಲಾಗದ ಹೊರತು ಸಂವಿಧಾನದ ಮೌಲ್ಯಗಳ ಕುಸಿತ ತಡೆಯಲು ಸಾಧ್ಯವಿಲ್ಲ ಎಂದು ವಿರೋಧಪಕ್ಷದ ನಾಯಕ ಸಿದ್ದರಾಮಯ್ಯ ಹೇಳಿದರು.

ಹಿಂದೆ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳಿಗೆ ಮತದಾರರೇ ಹಣ ಕೊಟ್ಟು ಹರಸುತ್ತಿದ್ದರು. ಈಗ ಮತ ಕೇಳಬೇಕಾದರೆ ಹಣ ಕೊಡಲೇಬೇಕು. ಕ್ರಿಮಿನಲ್‌ಗಳು, ಶ್ರೀಮಂತರು, ಹೊಡಿ–ಬಡಿ ಸಂಸ್ಕೃತಿಯವರು ಚುನಾವಣಾ ಕಣಕ್ಕೆ ಇಳಿಯುತ್ತಿದ್ದಾರೆ. ಚುನಾವಣೆ ಎಂದರೆ ವ್ಯಾಪಾರ, ಹರಾಜು ಎನ್ನುವಂತಾಗಿದೆ. ಚುನಾವಣಾ ವ್ಯವಸ್ಥೆ ದಿಕ್ಕಾಪಾಲಾಗಿದೆ. ಮಾಧ್ಯಮದವರಂತೂ ಉದ್ಯಮಿ, ಪತ್ರಕರ್ತ, ರಾಜಕಾರಣಿ ಹೀಗೆ ಎಲ್ಲ ಪಾತ್ರಗಳನ್ನು ನಿಭಾಯಿಸುತ್ತಿರುವುದರಿಂದ ನಾಲ್ಕನೇ ಆಧಾರ ಸ್ತಂಭ ಗಟ್ಟಿಯಾಗಿ ನಿಲ್ಲುವುದಾದರೂ ಹೇಗೆ ಎಂದು ಪ್ರಶ್ನಿಸಿದರು.

ಚುನಾವಣೆಯನ್ನು ಸರ್ಕಾರವೇ ನಡೆಸುವ ವ್ಯವಸ್ಥೆ ಜಾರಿಗೆ ಬರಬೇಕು. ನಾಮಪತ್ರ ಸಲ್ಲಿಸಿದ ಬಳಿಕ ಅಭ್ಯರ್ಥಿಗಳು ಪ್ರಚಾರಕ್ಕೆ ಹೋಗುವಂತಿರಬಾರದು. ಅಧಿಕಾರಕ್ಕಾಗಿ ನಾವೇ ಮೌಲ್ಯಗಳನ್ನು ನಾಶ ಮಾಡುತ್ತಿದ್ದೇವೆ. 10 ನೇ ಷೆಡ್ಯೂಲ್ ಇನ್ನಷ್ಟು ಬಲಗೊಳ್ಳಬೇಕು. ಪಕ್ಷಾಂತರ ತಡೆಯಲು ಕಾನೂನು ಜಾರಿಗೆ ತರಲಾಯಿತು. ಆದರೂ ಶಾಸಕರು ರಂಗೋಲಿ ಕೆಳಗೆ ನುಸುಳುತ್ತಾರೆ ಎಂದರು.

> ಜನಪ್ರತಿನಿಧಿಗಳು ಜನರ ಮನಸ್ಸಿನಲ್ಲಿ ಉಳಿಯುವಂಥ ಕೆಲಸ ಮಾಡಿ ಹೋಗಬೇಕು. ಇಲ್ಲದೇ ಹೋದರೆ ರಾಷ್ಟ್ರಪತಿಯಾದರೂ ಜನ ಗುರುತಿಸಲ್ಲ
>
> **ಗುರುರಾಜ ಕರಜಗಿ,** ಚಿಂತಕ

## ದಮನಿತರ ಧ್ವನಿ ಆಗಬೇಕು: ಸಿ.ಎಂ

'ಹಿಂದೆ ರಾಜಕೀಯ ಮುತ್ಸದ್ದಿಗಳಿದ್ದರು. ಅವರು ದೇಶಕ್ಕಾಗಿ ನಾವು ಎಂಬ ಭಾವನೆಯಲ್ಲಿದ್ದರು. ನಂತರ ಬಂದವರು ದೇಶ ಇರುವುದು ನಮಗಾಗಿ ಅಂದರು. ಇದೇ ಅಂದು ಮತ್ತು ಇಂದಿನ ವ್ಯತ್ಯಾಸ' ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು.

'ಜನಪ್ರತಿನಿಧಿಗಳು ಆದರ್ಶಪ್ರಾಯರಾಗಿರ ಬೇಕು. ಸ್ವಾರ್ಥಕ್ಕಾಗಿ ಅಧಿಕಾರ ಬಳಸಬಾರದು. ಇದು ಬಸವಣ್ಣನವರ ಆಶಯ. ಜನರಿಂದ ಆರಿಸಿ ಬಂದವರಿಗೆ ಜನರ ಕಾಳಜಿ ಇರಬೇಕು. ಸಾಮಾಜಿಕ ಮೌಲ್ಯಗಳು ಇಂದು ಕುಸಿಯುತ್ತಿವೆ. ಶೋಷಿತರ, ದಮನಿತರ ಧ್ವನಿಯಾಗಬೇಕು. ಅಹಿತಕರ ಘಟನೆ ನಡೆಯದ ರೀತಿ ಸದನದಲ್ಲಿ ನಾವು ನಡೆದುಕೊಳ್ಳಬೇಕು. ಆಗ ಮಾತ್ರ ಪ್ರಜಾಪ್ರಭುತ್ವದ ಅನುಷ್ಠಾನ ಸಾಧ್ಯ' ಎಂದರು.